ವಾವಿಸಂ:650

# ಅ.ಭಾ.84 ನೇಯ ಕನ್ನಡ ಸಾಹಿತ್ಯ ಸಮ್ಮೇಳನ
# ಕೃಷಿ ವಿವಿ ಆವರಣ ಪರಿಶೀಲನೆ
# ಸೂಕ್ಷ್ಮ ವಿಚಾರಗಳನ್ನು ಮುನ್ನೋಟದಿಂದ ಸಿದ್ಧಮಾಡಿಕೊಳ್ಳಿ
# ಸಚಿವ ದೇಶಪಾಂಡೆ ಸೂಚನೆ

**ಧಾರವಾಡ ( ಕರ್ನಾಟಕ ವಾರ್ತೆ) ಡಿ.2:** ಬರುವ ಜನವರಿ 4,5 ಹಾಗೂ 6 ರಂದು ಧಾರವಾಡದಲ್ಲಿ ನಡೆಯುವ ಅ.ಭಾ.84 ನೇಯ ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ಸಿಗೆ ಚುನಾಯಿತ ಪ್ರತಿನಿಧಿಗಳು, ಅಧಿಕಾರಿಗಳು ಹಾಗೂ ಕಸಾಪ ಪದಾಧಿಕಾರಿಗಳು ಸಮನ್ವಯದಿಂದ ಸೂಕ್ಷ್ಮ ವಿಚಾರಗಳನ್ನೂ ಸಹ ಮುನ್ನೋಟದಿಂದ ಆಲೋಚಿಸಿ, ಸಿದ್ಧತೆ ಮಾಡಿಕೊಳ್ಳಬೇಕು ಎಂದು ಕಂದಾಯ, ಕೌಶಲ್ಯಾಭಿವೃದ್ಧಿ,ಉದ್ಯಮಶೀಲತೆ,ಜೀವನೋಪಾಯ ಖಾತೆಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ವಿ.ದೇಶಪಾಂಡೆ ಹೇಳಿದರು.

ಇಲ್ಲಿನ ಕೃಷಿ ವಿವಿ ಆವರಣಕ್ಕೆ ಇಂದು ಭೇಟಿ ನೀಡಿದ ಅವರು,ಮುಖ್ಯ ವೇದಿಕೆ ನಿರ್ಮಾಣ ಸ್ಥಳ,ಮಾಧ್ಯಮ ಕೇಂದ್ರ, ಭೋಜನಾಂಗಣ, ಪುಸ್ತಕ, ವಸ್ತು ಪ್ರದರ್ಶನ ಮಳಿಗೆಗಳು, ರೈತರ ಜ್ಞಾನಾಭಿವೃದ್ಧಿ ಕೇಂದ್ರದ ಸಭಾಂಗಣ ಮತ್ತಿತರ ಸ್ಥಳಗಳಿಗೆ ಭೇಟಿ ನೀಡಿದರು.

ಶುಚಿತ್ವ,ಶೌಚಾಲಯ ನಿರ್ಮಾಣ,ನೀರು ಪೂರೈಕೆ,ವಿದ್ಯುದಲಂಕಾರ ಸಮರ್ಪಕವಾಗಿ ಇರಬೇಕು.ಗೃಹ ಕೈಗಾರಿಕೆಗಳು ಮತ್ತು ಸ್ವಸಹಾಯ ಸಂಘಗಳ ಉತ್ಪನ್ನಗಳ ಮಾರುಕಟ್ಟೆಗೆ ಮಳಿಗೆ ನೀಡಬೇಕು.ಸಮ್ಮೇಳನದ ಹಿನ್ನಲೆಯಲ್ಲಿ ಡಿ.25 ರಿಂದ ಸ್ವಚ್ಛತಾ ಆಂದೋಲನ ಆರಂಭಿಸಬೇಕು ಎಂದು ಸೂಚಿಸಿದರು.

ಶಾಸಕರಾದ ಪ್ರಸಾದ ಅಬ್ಬಯ್ಯ, ಅರವಿಂದ ಬೆಲ್ಲದ, ಅಮೃತ ದೇಸಾಯಿ, ವಿಧಾನಪರಿಷತ್ ಮಾಜಿ ಸದಸ್ಯ ವೀರಣ್ಣ ಮತ್ತಿಕಟ್ಟಿ, ಜಿಲ್ಲಾಧಿಕಾರಿ ದೀಪಾ ಚೋಳನ್,ಜಿಪಂ ಸಿಇಓ ಡಾ.ಸತೀಶ ಬಿ.ಸಿ. ಹುಬ್ಬಳ್ಳಿ ಧಾರವಾಡ ಪೊಲೀಸ್ ಆಯುಕ್ತ ಎಂ.ಎನ್.ನಾಗರಾಜ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಿ.ಸಂಗೀತಾ, ಅಪರ ಜಿಲ್ಲಾಧಿಕಾರಿ ಇಬ್ರಾಹಿಂ ಮೈಗೂರ,ಹುಬ್ಬಳ್ಳಿ ಧಾರವಾಡ ಮಹಾನಗರಪಾಲಿಕೆ ಆಯುಕ್ತ ಶಕೀಲ್ ಅಹ್ಮದ್, ಉಪವಿಭಾಗಾಧಿಕಾರಿ ಮಹ್ಮದ್ ಜುಬೇರ್, ರಂಗಾಯಣ ಆಡಳಿತಾಧಿಕಾರಿ ಕೆ.ಹೆಚ್.ಚನ್ನೂರ, ಆಹಾರ ಇಲಾಖೆ ಜಂಟಿ ನಿರ್ದೇಶಕ ಸದಾಶಿವ ಮರ್ಜಿ,ಡಿಸಿಪಿ ಬಿ.ಎಸ್.ನೇಮಗೌಡ, ಲೋಕೋಪಯೋಗಿ ಕಾರ್ಯನಿರ್ವಾಹಕ ಇಂಜಿನಿಯರ್ ವಿರೂಪಾಕ್ಷ ಯಮಕನಮರಡಿ, ಕಸಾಪ ಅಧ್ಯಕ್ಷ ಡಾ.ಲಿಂಗರಾಜ ಅಂಗಡಿ ಸೇರಿದಂತೆ ಅನೇಕ ಗಣ್ಯರು,ಅಧಿಕಾರಿಗಳು ಇದ್ದರು.

*******